# ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ,

## ಸಹಾಯಕ ಕಾರ್ಯಪಾಲಕ ಅಭಿಯಂತರರು, ಯಲಹಂಕ ಉಪ ವಿಭಾಗ

## ಕೆಂಪೇಗೌಡ ವಾರ್ಡ್ ನಂ-01ರಲ್ಲಿ

## ದಿನಾಂಕ: 17-12-2022 ರಂದು ನಡೆದ ವಾರ್ಡ್ ಸಮಿತಿ ಸಭಾ ನಡವಳಿ.

ದಿನಾಂಕ: 17-12-2022 ರಂದು ಶನಿವಾರ ಬೆಳಗ್ಗೆ 11.00 ಗಂಟೆಗೆ ಬಿ.ಬಿ.ಎಂ.ಪಿ ಯಲಹಂಕ ವಿಭಾಗದ ಕಛೇರಿಯಲ್ಲಿ ವಾರ್ಡ್ ನಂ-01ರ ವಾರ್ಡ್ ಸಮಿತಿಯ ಮಾನ್ಯ ನೊಡೆಲ್ ಅಧಿಕಾರಿಗಳು ಹಾಗೂ ಕಾರ್ಯದರ್ಶಿಗಳು ಜೊತೆ ನೆಡೆದ ವಾರ್ಡ್ ಕಮಟಿ ಸಭೆಯ ನಡವಳಿಗಳು.

| ಕ್ರ.ಸಂ | ಸಭೆಯಲ್ಲಿ ಭಾಗವಹಿಸಿದ ಅಧಿಕಾರಿ ಹೆಸರು | ಪದನಾಮ |
|---|---|---|
| 01 | ಶ್ರೀ.ರಾಮಸಂಜೀವಯ್ಯ | ಸಹಾಯಕ ಕಾರ್ಯಪಾಲಕ ಅಭಿಯಂತರರು ಯಲಹಂಕ ಉಪ ವಿಭಾಗ ಹಾಗೂ ಬಿ.ಬಿ.ಎಂ.ಪಿ ನೋಡಲ್ ಅಧಿಕಾರಿಗಳು (ವಾರ್ಡ್ ನಂ-01) |
| 02 | ಶ್ರೀ.ದೇವರಾಜಯ್ಯ.ಕೆ.ಬಿ. | ಸಹಾಯಕ ಅಭಿಯಂತರರು (ವಾರ್ಡ್ ನಂ-01) |
| 03 | ಶ್ರೀ.ಕೆ.ಎನ್. ಬಾಬುರೆಡ್ಡಿ | ಸಹಾಯಕ ಅಭಿಯಂತರರು (ವಿದ್ಯುತ್) |
| 04 | ಶ್ರೀ.ಅಶೋಕ್ .ಎಂ.ಆರ್ | ಸಹಾಯಕ ಕಂದಾಯ ಅಧಿಕಾರಿಗಳು ಯಲಹಂಕ ಉಪ ವಿಭಾಗ ಗೈರು ಹಾಜರಾಗಿರುತ್ತಾರೆ. |
| 05 | ಶ್ರೀ.ಶಿವಕುಮಾರ್.ಎ.ವಿ | ರೆವಿನ್ಯೂ ಇನ್ಸ್‌ಪೇಕ್ಟರ್ ಗೈರು ಹಾಜರಾಗಿರುತ್ತಾರೆ. |
| 06 | ಶ್ರೀಮತಿ. ಸುನಂದಮ್ಮ | ಹಿರಿಯ ಆರೋಗ್ಯ ಪರಿವೀಕ್ಷಕರು |
| 07 | ಶ್ರೀ. ವಿನಯ ಕುಮಾರ್ | ಸಹಾಯಕ ಅಭಿಯಂತರರು (ಬಿ.ಡಬ್ಲ್ಯೂ.ಎಸ್.ಎಸ್.ಬಿ) |
| 08 | ಶ್ರೀ. ಎನ್. ಶ್ರೀರಾಮ ರೆಡ್ಡಿ | ರೆವಿನ್ಯೂ ಇನ್ಸ್‌ಪೇಕ್ಟರ್ ಗೈರು ಹಾಜರಾಗಿರುತ್ತಾರೆ. |
| 09 | ಶ್ರೀ.ವಿವೇಕ್ | ಕಿರಿಯ ಆರೋಗ್ಯಪರಿವೀಕ್ಷಕರು ವಾಡ್-1 |
| 10 | ಶ್ರೀ.ಕುಮಾರ್ ಸ್ವಾಮಿ | ಜಾನುವಾರ ಅಧಿಕಾರಿಗಳು |
| 11 | ಶ್ರೀ.ನವೀನ್ ಕುಮಾರ್ ವಿ | ಸಹಾಯಕ ಅಭಿಯಂತರರು (ವಿದ್ಯುತ್) ಬಿ.ಬಿ.ಎಂ.ಪಿ |
| | ಬಡಾವಣೆ ಕ್ಷೇಮಾಭಿವೃದಿ ಸಂಘದ ಅಧ್ಯಕ್ಷರು/ಕಾರ್ಯದರ್ಶಿ/ಸದಸ್ಯರು/ಸಾರ್ವಜನಿಕರು | |
| 01 | ಶ್ರೀ.ಹೇಮರಾಜ್ | ಸ್ಥಳೀಯ ಮುಖಂಡರು |
| 02 | ಶ್ರೀ. ಅ.ಬ.ಶಿವಕುಮಾರ್ | ಸ್ಥಳೀಯ ಮುಖಂಡರು |
| 03 | ಶ್ರೀ.ರಾಮರೆಡ್ಡಿ | ಸ್ಥಳೀಯ ನಿವಾಸಿಗಳು |

| | | |
|---|---|---|
| 04 | ಶ್ರೀ.ಎ.ಎಸ್.ರಾಜು | ಸ್ಥಳೀಯ ನಿವಾಸಿಗಳು |
| 05 | ಶ್ರೀ.ಶ್ರೀನಿವಾಸಲು | ಸ್ಥಳೀಯ ನಿವಾಸಿಗಳು |
| 06 | ಶ್ರೀ.ವೆಂಕಟೇಶ್ | ಮಾರುತಿನಗರ |
| 07 | ಶ್ರೀ.ದಶರಥ | ಯಲಹಂಕ |
| 08 | ಶ್ರೀ.ಎ.ಎನ್.ಮದುಸೂದನ್ (ಮಂಜುನಾಥ) | ಎಲೆಕ್ಟ್ರೀಕಲ್ಸ್ ಗುತ್ತಿಗೆದಾರರು |
| 09 | ಶ್ರೀ.ಅಕಾಶ್ | ಮಾರ್ಷಲ್ |

ಸಭೆಗೆ ಹಾಜರಿದ್ದ ನೋಡೆಲ್ ಅಧಿಕಾರಿಗಳು ಹಾಗೂ ಬಾಗವಹಿಸಿದ್ದ ಎಲ್ಲಾ ಅಧಿಕಾರಿಗಳನ್ನು ಮತ್ತು ಸಾರ್ವಜನಿಕರ ಸಭೆಗೆ ಸ್ವಾಗತಿಸುತ್ತಾ ಸಭೆ ಪ್ರಾರಂಭಿಸಲು ನೋಡೆಲ್ ಅಧಿಕಾರಿರವರನ್ನು ಕೋರಲಾಯಿತು.

ಶ್ರೀ.ರಾಮುಸಂಜೀವಯ್ಯ ಸಹಾಯಕ ಕಾರ್ಯಪಾಲಕ ಅಭಿಯಂತರರು ಯಲಹಂಕ ಉಪ ವಿಭಾಗ ಹಾಗೂ ಸಮಿತಿಯ ನೋಡೆಲ್ ಅಧಿಕಾರಿಯವರು ಸಬೆಯನ್ನು ಪ್ರಾರಂಭಿಸಿ ಈ ಹಿಂದಿನ ಸಭೆಯಲ್ಲಿ ಅಂದರೆ ದಿನಾಂಕ: 03-12-2022 ರಂದು ನಡೆದ ಸಭೆಯಲ್ಲಿ ಕೈಗೊಂಡ ಕ್ರಮಗಳ ಬಗ್ಗೆ ವಿವರಣೆ ಕೇಳಿದರು. ಹಾಗೂ ವಾರ್ಡ್ ನಂ-01ರ ವ್ಯಾಪ್ತಿಯಲ್ಲಿ ಬರುವ ಎಲ್ಲಾ ಅಧಿಕಾರಿಗಳಿಗೆ ಕೈಗೊಂಡ ಕ್ರಮದ ಬಗ್ಗೆ ವರದಿ ನೀಡುವಂತೆ ಸಭೆಯಲ್ಲಿ ಸೂಚಿಸಿದರು. ಹಾಗೂ ಈ ಹಿಂದೆ ಕೈಗೊಂಡಿರುವ ಸಭೆಯ ನಡವಳಿಗಳನ್ನು ಸಭೆಯಲ್ಲಿ ವರದಿಯನ್ನು ಒದಲಾಯಿತು.

| ಕ್ರ.ಸಂ | ವಿಷಯ ಸೂಚಿ | ನಿರ್ಣಯ | ಕ್ರಮ ತೆಗೆದುಕೊಳ್ಳಬೇಕಾದ ಅಧಿಕಾರಿ |
|---|---|---|---|
| 01 | ಯಲಹಂಕ ಕೆಂಪೇಗೌಡ ವಾರ್ಡ್ ನಂ-01ರ ವ್ಯಾಪ್ತಿಯಲ್ಲಿರುವ ಅಯ್ಯಪ್ಪ ಸ್ವಾಮಿ ದೇವಸ್ಥಾನದ (ಕಲ್ಯಾಣ ಮಂಟಪದ ಹತ್ತಿರ) ಬಿ.ಬಿ.ರಸ್ತೆ ಹತ್ತಿರ ಬಿ.ಡಬ್ಲ್ಯೂ.ಎಸ್.ಎಸ್.ಬಿ ಇಲಾಖೆಯಿಂದ ಪಂಪಿಂಗ್ ಲೈನ್ ಅಳವಡಿಸಿರುವುದಿಲ್ಲ. ಮತ್ತು ಸುಮಾರು ಒಂದುವರೆ ತಿಂಗಳಿಂದ ಕಾವೇರಿ ನಿರು ಬಿಡುತ್ತಿಲ್ಲವೆಂದು ಹಾಗೂ ಇದರ ಬಗ್ಗೆ ಹಲವಾರು ಭಾರಿ ದೂರುಗಳನ್ನು ಸಲ್ಲಿಸಿದರೂ ಸಹ ಯಾವುದೇ ಸೂಕ್ತ ಕ್ರಮ ಕೈಗೊಂಡಿಲ್ಲವೆಂದು ಸ್ಥಳೀಯ ನಿವಾಸಿಗಳಾದ ಶ್ರೀ.ಹೇಮರಾಜ್ ರವರು ಸಭೆಗೆ ತಿಳಿಸಿದರು. | ಇದಕ್ಕೆ ಸಂಬಂದಿಸಿದಂತೆ ನೋಡೆಲ್ ಅಧಿಕಾರಿಗಳು ಮಾತನಾಡಿ ಸಾರ್ವಜನಿಕರಿಗೆ ಕುಡಿಯುವ ನೀರಿನ ಸಮಸ್ಯೆ ಪರಿಹರಿಸಲು ಪರ್ಯಾಯ ವ್ಯವಸ್ಥೆ ಅಥವಾ ಟ್ಯಾಂಕರ್‌ಗಳ ಮೂಲಕ ಸರಬರಾಜು ಮಾಡುವಂತೆ ತಿಳಿಸಿದರು. ಮತ್ತು ಪಂಪಿಂಗ್ ಲೈನ್ ಅಳವಡಿಸುವ ಸಂಬಂಧ ಸ್ಥಳ ಪರಿಶೀಲನೆ ಮಾಡಿ ಸೂಕ್ತ ಕ್ರಮ ಕೈಗೊಳ್ಳುವಂತೆ ಸಭೆಯಲ್ಲಿ ಹಾಜರಿದ್ದ ಶ್ರೀ.ವಿನಯ್ ಕುಮಾರ್ ಬಿ.ಡಬ್ಲ್ಯೂ.ಎಸ್.ಎಸ್.ಬಿ ಸಹಾಯಕ ಅಭಿಯಂತರರಿಗೆ ತಿಳಿಸಿದರು. | ಶ್ರೀ.ವಿನಯ ಕುಮಾರ್ ಬಿ.ಡಬ್ಲ್ಯೂ.ಎಸ್.ಎಸ್.ಬಿ ಸಹಾಯಕ ಅಭಿಯಂತರರು |
| 02 | ಕೆಂಪೇಗೌಡ ವಾರ್ಡ್ ನಂ-01ರ ವ್ಯಾಪ್ತಿಯಲ್ಲಿರುವ ಯಲಹಂಕ ರೈತರ ಸಂತೆ ಹತ್ತಿರ ಟ್ರಾಫಿಕ್ ನಿರ್ವಹಣೆ ಮಾಡುವ ಸಲುವಾಗಿ ಪ್ರತಿದಿನ 2 ಜನ ಮಾರ್ಷಲ್‌ಗಳನ್ನು ನಿಯೋಜಿಸಿ ಕ್ರಮ ಕೈಗೊಳ್ಳಬೇಕೆಂದು ಸಭೆಯಲ್ಲಿ | ಇದಕ್ಕೆ ಸಂಬಂದಿಸಿದಂತೆ ನೋಡೆಲ್ ಅಧಿಕಾರಿಗಳು ಮಾತನಾಡಿ ಆರೋಗ್ಯ ವೈದ್ಯಾಧಿಕಾರಿಗಳ ಜೊತೆ ಮಾತನಾಡಿ ಮಾರ್ಷಲ್ ಗಳನ್ನು ನಿಯೋಜಿಸಲು ಕ್ರಮ ವಹಿಸಲಾಗುವುದೆಂದು ಸಭೆಯಲ್ಲಿ ತಿಳಿಸಿದರು. | ಆರೋಗ್ಯ ವೈದ್ಯಾಧಿಕಾರಿಗಳು ಯಲಹಂಕ ವಲಯ |

| | | | |
|---|---|---|---|
| | ಅ.ಬ.ಶಿವಕುಮಾರ್ ರವರು ತಿಳಿಸಿದರು | | |
| 03 | ಯಲಹಂಕ ಸರ್ಕಾರಿ ಆಸ್ಪತ್ರೆಯ ಎರಡೂ ಬದಿಯಲ್ಲಿ ಪಾತ್ರೆ ವ್ಯಾಪಾರ ಮಾಡುವ ವ್ಯಾಪಾರಿಗಳು ಪಾತ್ರೆಗಳನ್ನು ಪಾದಚಾರಿ ಮಾರ್ಗಗಳಲ್ಲಿ ಇಟ್ಟಿರುವುದಾಗಿ ಇದರಿಂದ ಸಾರ್ವಜನಿಕರ ಒಡಾಟಕ್ಕೆ ತೊಂದರೆ ಉಂಟಾಗಿರುವುದಾಗಿ ಸಭೆಯಲ್ಲಿ ಸಾರ್ವಜನಿಕರು ದೂರನ್ನು ಸಲ್ಲಿಸಿದರು ಮತ್ತು ರಾತ್ರಿಯ ವೇಳೆ ತಳ್ಳುವ ಗಾಡಿಗಳನ್ನು. ಪಾದಚಾರಿ ಮಾರ್ಗಗಳಲ್ಲಿ ಇಟ್ಟು ವ್ಯಾಪಾರಿಗಳು ಮನೆಗೆ ಹೊಗುತ್ತಿರುವವರ ವಿರುದ್ದ ಕ್ರಮ ಕೈಗೊಳ್ಳುವಂತೆ ಶ್ರೀ.ಹೆಮರಾಜ್ ರವರು ಸಭೆಗೆ ಕೋರಿದರು. | ಇದಕ್ಕೆ ಸಂಬಂದಿಸಿದಂತೆ ಪಾದಚಾರಿ ಮಾರ್ಗಗಳಲ್ಲಿ ಇಟ್ಟಿರುವ ಪಾತ್ರೆಗಳನ್ನು ತೆಗೆಯುವಂತೆ ಹಾಗೂ ತೆರವುಗೊಳಿಸುವಂತೆ ಸಂಬಂಧಿಸಿದ ಕಿರಿಯ ಆರೋಗ್ಯ ಪರಿವೀಕ್ಷಕರಿಗೆ ತಿಳಿಸಿದರು. | ಕಿರಿಯ ಆರೋಗ್ಯ ಪರಿವೀಕ್ಷಕರು ವಾರ್ಡ್ ನಂ-01. |
| 04 | ಯಲಹಂಕ ಆಸ್ಪತ್ರೆ ರಸ್ತೆ ಒಳಭಾಗದಲ್ಲಿ ಟ್ರಾಫಿಕ್ ಪೊಲೀಸ್ ರವರು ಬಂದು ಗಾಡಿಗಳಿಗೆ ದಂಡ ವಿದಿಸುತ್ತಿರುವುದರ ಬಗ್ಗೆ ಅ.ಬ.ಶಿವಕುಮಾರ್ ರವರು ಸಭೆಯಲ್ಲಿ ಚರ್ಚಿಸಿದರು | ಇದಕ್ಕೆ ಸಂಬಂದಿಸಿದಂತೆ ನೊಡೆಲ್ ಅಧಿಕಾರಿಗಳು ಮಾತನಾಡಿ ಟ್ರಾಫಿಕ್ ಪೊಲಿಸ್ ರವರಿಗೆ ಪತ್ರ ಬರೆದು ಸದರಿ ದೂರಿನ ಬಗ್ಗೆ ಕ್ರಮ ಕೈಗೊಳ್ಳುವಂತೆ ತಿಳಿಸಲಾಗುವುದೆಂದು ಸಭೆಯಲ್ಲಿ ಉತ್ತರಿಸಿದರು. | ಟ್ರಾಫಿಕ್ ಪೊಲಿಸ್ ಯಲಹಂಕ ಸಂಚಾರಿ ಪೊಲಿಸ್ ಠಾಣೆ |
| 05 | ಯಲಹಂಕ 1ನೇ ಮುಖ್ಯರಸ್ತೆ ಗಾಂಧಿನಗರ ಕೆ.ಹೆಚ್.ಬಿ ಕಾಲೋನಿ ಪ್ರಕಾಶ್ ಟಾಕಿಸ್ ರಸ್ತೆಯಲ್ಲಿ ಸಾತನೂರು ಸರ್ವಿಸ್ ಸ್ಟೇಷನ್ ರವರು ರಸ್ತೆಯಲ್ಲಿ ಕಾರುಗಳನ್ನು ಪಾರ್ಕಿಂಗ್ ಮಾಡುತ್ತಿರುವ ಬಗ್ಗೆ ಮತ್ತು ರಾತ್ರಿಯ ವೇಳೆ ಸರಕುಸಾಗಿಸುವ ಮೆಟಾಡೊರ್ ವಾಹನಗಳನ್ನು ನಿಲ್ಲಿಸುತ್ತಿರುವ ಬಗ್ಗೆ ಶ್ರೀ.ಹೆಮರಾಜ್ ರವರು ಸಭೆಯಲ್ಲಿ ದೂರನ್ನು ಸಲ್ಲಿಸಿದರು. | ಇದಕ್ಕೆ ಸಂಬಂದಿಸಿದಂತೆ ನೊಡೆಲ್ ಅಧಿಕಾರಿಗಳು ಮಾತನಾಡಿ ಟ್ರಾಫಿಕ್ ಪೊಲಿಸ್ ರವರಿಗೆ ಪತ್ರ ಬರೆದು ಸದರಿ ದೂರಿನ ಬಗ್ಗೆ ಕ್ರಮ ಕೈಗೊಳ್ಳುವಂತೆ ತಿಳಿಸಲಾಗುವುದೆಂದು ಸಭೆಯಲ್ಲಿ ಉತ್ತರಿಸಿದರು. | ಟ್ರಾಫಿಕ್ ಪೊಲಿಸ್ ಯಲಹಂಕ ಸಂಚಾರಿ ಪೊಲಿಸ್ ಠಾಣೆ |

ಈ ಮೇಲ್ಕಂಡ ಎಲ್ಲಾ ಅಂಶಗಳನ್ನು ಕೂಲಂಕುಷವಾಗಿ ಚರ್ಚಿಸಲಾಯಿತು. ಹಾಗೂ ಸಭೆಯಲ್ಲಿ ಹಾಜರಿದ್ದ ಎಲ್ಲಾ ಸದಸ್ಯರಿಗೆ ಹಾಗೂ ಅಧಿಕಾರಿಗಳಿಗೆ ವಂದನೆಗಳನ್ನು ಸಲ್ಲಿಸಿ ಸಭೆಯನ್ನು ಮುಕ್ತಾಯಗೊಳಿಸಲಾಯಿತು.

Ramarajenoral.

ಶ್ರೀ.ರಾಮಸಂಜೀವಯ್ಯ
ಸಹಾಯಕ ಕಾರ್ಯಪಾಲಕ ಅಭಿಯಂತರರು ಹಾಗೂ
ನೋಡೆಲ್ ಅಧಿಕಾರಿಗಳು ವಾರ್ಡ್ ನಂ-01

ಶ್ರೀ.ಕೆ.ಬಿ.ದೇವರಾಜಯ್ಯ
ಸಹಾಯಕ ಅಭಿಯಂತರರು

ಪ್ರತಿಯನ್ನು:

1. ಮಾನ್ಯ ಜಂಟಿ ಆಯುಕ್ತರು ಯಲಹಂಕ ವಲಯರವರ ಆಪ್ತ ಶಾಖೆಗೆ ಕಳುಹಿಸಿದೆ.
2. ಮಾನ್ಯ ಮುಖ್ಯ ಅಭಿಯಂತರರು ಯಲಹಂಕ ವಲಯರವರ ಆಪ್ತ ಶಾಖೆಗೆ ಕಳುಹಿಸಿದೆ.
3. ಆರೋಗ್ಯ ವೈದ್ಯಾಧಿಕಾರಿಗಳು ಯಲಹಂಕ ವಲಯರವರಿಗೆ ಕಳುಹಿಸಿದೆ.

4. ಕಾರ್ಯಪಾಲಕ ಅಭಿಯಂತರರು. ಬಿ.ಬಿ.ಎಂ.ಪಿ ಯಲಹಂಕ ವಿಭಾಗ/ವಿದ್ಯುತ್/ರಸ್ತೆ ಮತ್ತು ಮೂಲಭೂತ ಸೌಕಾರ್ಯ/ಯೋಜನೆ/ಕೆರೆಗಳು/ ಯಲಹಂಕ ವಲಯ ಸೂಕ್ತ ಕ್ರಮಕ್ಕಾಗಿ.
5. ಸಹಾಯಕ ಕಾರ್ಯಪಾಲಕ ಅಭಿಯಂತರರು. ಘನತ್ಯಾಜ್ಯ ನಿರ್ವಹಣೆ/ ವಿದ್ಯುತ್/ ಬೇಸ್ಕಾಂ/ ಬಿಡಬ್ಲ್ಯೂ.ಎಸ್.ಎಸ್.ಬಿ/ಬೋರೆವೆಲ್ ಡಿವಿಷನ್/ ಯೋಜನೆ/ಯಲಹಂಕ ವಲಯರವರ ಸೂಕ್ತ ಕ್ರಮಕ್ಕಾಗಿ.
6. ಸಹಾಯಕ ಕಂದಾಯ ಅಧಿಕಾರಿಗಳು ಯಲಹಂಕ ಉಪ ವಿಭಾಗ/ಜಾಹಿರಾತು ಬಿ.ಬಿ.ಎಂ.ಪಿ ರವರ ಸೂಕ್ತ ಕ್ರಮಕ್ಕಾಗಿ.
7. ಆರಕ್ಷಕ ನೀರಿಕ್ಷಕರು ಯಲಹಂಕ ಪೊಲೀಸ್ ಠಾಣೆ ಸಂಚಾರಿ/ ಕಾನೂನು ಸುವ್ಯವಸ್ಥೆ/ ಯಲಹಂಕ ಬೆಂಗಳೂರು ರವರ ಸೂಕ್ತ ಕ್ರಮಕ್ಕಾಗಿ.
8. ಜಾನುವಾರಿ ಅಧಿಕಾರಿಗಳು ಪಶುಪಾಲನೆ ವಿಭಾಗ ಯಲಹಂಕ ವಲಯ ರವರ ಸೂಕ್ತ ಕ್ರಮಕ್ಕಾಗಿ.
9. ಅಧೀಕ್ಷಕರು ತೋಟಗಾರಿಕೆ ಇಲಾಖೆ ಬಿ.ಬಿ.ಎಂ.ಪಿ ಯಲಹಂಕ ವಲಯರವರ ಸೂಕ್ತ ಕ್ರಮಕ್ಕಾಗಿ.
10. ಡಿಪೋ ಮ್ಯಾನೇಜರ್ ಡಿಪೊ-13 ಪುಟ್ಟೇನಹಳ್ಳಿ ಡಿಪೋ ಯಲಹಂಕ ಬೆಂಗಳೂರು ಸೂಕ್ತ ಕ್ರಮಕ್ಕಾಗಿ.
11. ಕಛೇರಿ ಕಡತಕ್ಕೆ.